12. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು :

ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆಯ ಸಚಿವಾಲಯ :– ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ 2012ನೇ ಸಾಲಿನ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ತಾಂತ್ರಿಕ ಶಿಕ್ಷಣ ಇಲಾಖೆಯ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ವಿಧೇಯಕವನ್ನು ಸಭೆಯ ಮುಂದಿಡುತ್ತಿದ್ದೇನೆ.

13. ಶಾಸನ ರಚನೆ :

I. ವಿಧೇಯಕವನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ತಾಂತ್ರಿಕ ಶಿಕ್ಷಣ ಇಲಾಖೆಯ ಸಿಬ್ಬಂದಿ ವರ್ಗಾವಣೆ ನಿಯಂತ್ರಣ) ವಿಧೇಯಕ 2012

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಅರವಿಂದ ಲಿಂಬಾವಳಿ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) (ಮಾನ್ಯ ಉನ್ನತ ಶಿಕ್ಷಣ ಸಚಿವರ ಪರವಾಗಿ) :– ಮಾನ್ಯ ಅಧ್ಯಕ್ಷರೆ, ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದ ಲ್ಲಿರುವ 2012ನೇ ಸಾಲಿನ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ತಾಂತ್ರಿಕ ಶಿಕ್ಷಣ ಇಲಾಖೆಯ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು :– ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ,

"ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ 2012ನೇ ಸಾಲಿನ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ತಾಂತ್ರಿಕ ಶಿಕ್ಷಣ ಇಲಾಖೆಯ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ವಿಧೇಯಕವನ್ನು ಈ ಸಭೆಯು ಪರ್ಯಾಲೋಚಿಸುತ್ತದೆ"